KEA

ಕರ್ನಾಟಕ ಸರ್ಕಾರ

# ಕರ್ನಾಟಕ ಪರೀಕ್ಷಾ ಪ್ರಾಧಿಕಾರ

ಸಂಪಿಗೆ ರಸ್ತೆ, 18ನೇ ಅಡ್ಡ ರಸ್ತೆ, ಮಲ್ಲೇಶ್ವರಂ, ಬೆಂಗಳೂರು–560 012 ದೂರವಾಣಿ: 080–23460460 (5 ಲೈನ್‌ಗಳು)

ಫ್ಯಾಕ್ಸ್: 080–23461576 ಇಮೇಲ್: keauthority-ka@nic.in ವೆಬ್‌ಸೈಟ್: http://kea.kar.nic.in

**ಸಂಖ್ಯೆ: ಇಡಿ/ಕೆಇಎ/ಆಡಳಿತ/ಸಿ.ಆರ್.13/2019–20** **ದಿನಾಂಕ: 04.02.2020**

## ಅಧಿಸೂಚನೆ

## 2020–21ನೇ ಸಾಲಿಗೆ ಕರ್ನಾಟಕದ ರಾಜ್ಯದಲ್ಲಿನ ವೃತ್ತಿಪರ ಕೋರ್ಸುಗಳಿಗೆ ಪ್ರವೇಶ

1. ವೃತ್ತಿಪರ ಶಿಕ್ಷಣ ಸಂಸ್ಥೆಗಳಲ್ಲಿನ ಸರ್ಕಾರಿ ಸೀಟುಗಳ ಪ್ರವೇಶಕ್ಕಾಗಿ ಕರ್ನಾಟಕ ಅಭ್ಯರ್ಥಿಗಳ ಆಯ್ಕೆ, 2006 ನಿಯಮಗಳು (ತಿದ್ದುಪಡಿಗಳು) ನಿಯಮ 3, ನಿಯಮ 6 (3) ಮತ್ತು ನಿಯಮ (7) ರ ಅನ್ವಯ ಹಾಗು ಸರ್ಕಾರದ ಆದೇಶದ ಅನುಸಾರವಾಗಿ, ಕರ್ನಾಟಕ ಪರೀಕ್ಷಾ ಪ್ರಾಧಿಕಾರವು, ಕರ್ನಾಟಕ ಸಾಮಾನ್ಯ ಪ್ರವೇಶ ಪರೀಕ್ಷೆ–2020ಕ್ಕೆ, ಅರ್ಹತೆ / ಮೆರಿಟ್ ಅನ್ನು ಆಧರಿಸಿ, ಕರ್ನಾಟಕ ರಾಜ್ಯದಲ್ಲಿರುವ ಸರ್ಕಾರಿ / ವಿಶ್ವವಿದ್ಯಾಲಯ / ಖಾಸಗಿ ಅನುದಾನಿತ / ಖಾಸಗಿ ಅನುದಾನರಹಿತ ವೃತ್ತಿ ಶಿಕ್ಷಣ ಸಂಸ್ಥೆಗಳಲ್ಲಿರುವ ಇಂಜಿನಿಯರಿಂಗ್, ತಂತ್ರಜ್ಞಾನ, ಯೋಗ ಮತ್ತು ನ್ಯಾಚುರೋಪತಿ, ಬಿ–ಫಾರ್ಮ, 2ನೇ ವರ್ಷದ ಬಿ. ಫಾರ್ಮ ಮತ್ತು ಫಾರ್ಮಾ–ಡಿ, ಕೃಷಿ ವಿಜ್ಞಾನ ಕೋರ್ಸುಗಳು ಹಾಗು ವೆಟರಿನರಿ ಕೋರ್ಸುಗಳಲ್ಲಿ ಲಭ್ಯವಿರುವ ಸರ್ಕಾರದ ಪಾಲಿನ ಸೀಟುಗಳಿಗೆ ಸಂಬಂಧಿಸಿದಂತೆ, ಪೂರ್ಣಾವಧಿ ಕೋರ್ಸುಗಳ ಮೊದಲನೇ ವರ್ಷಕ್ಕೆ ಅಥವಾ ಮೊದಲನೇ ಸೆಮಿಸ್ಟರ್‌ಗೆ ಸರ್ಕಾರವು ನೀಡುವ ಸೀಟ್ ಮ್ಯಾಟ್ರಿಕ್ಸ್ ನಂತೆ 2020–21ನೇ ಸಾಲಿಗೆ ಅನ್ವಯಿಸುವಂತೆ ಪ್ರವೇಶ ನೀಡುವುದಕ್ಕೆ ಅರ್ಹ ಕರ್ನಾಟಕದ ವಿದ್ಯಾರ್ಥಿಗಳಿಂದ ಹಾಗೂ ಜಮ್ಮು ಮತ್ತು ಕಾಶ್ಮೀರದಿಂದ ವಲಸೆ ಬಂದಿರುವವರ ಮಕ್ಕಳಿಂದ ಅರ್ಜಿಗಳನ್ನು ಆಹ್ವಾನಿಸಲಾಗಿದೆ.
2. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮುಖಾಂತರ ವೃತ್ತಿ ಶಿಕ್ಷಣ ಕೋರ್ಸುಗಳಿಗೆ ಪ್ರವೇಶ ಪಡೆಯುವುದಕ್ಕೆ ಅಭ್ಯರ್ಥಿಗಳು ಅರ್ಜಿ ಸಲ್ಲಿಸಿ ಕೆಇಎ ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಗೆ ಹಾಜರಾಗಬೇಕಿರುತ್ತದೆ.
3. ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಸರ್ಕಾರದ ಪಾಲಿನ ವೈದ್ಯಕೀಯ, ದಂತ ವೈದ್ಯಕೀಯ, ಆಯುರ್ವೇದ, ಯುನಾನಿ, ಹೋಮಿಯೋಪತಿ ಸೀಟುಗಳ ಪ್ರವೇಶಕ್ಕಾಗಿ, ಅಭ್ಯರ್ಥಿಗಳು, ಎನ್‌ಟಿಎ, ನವದೆಹಲಿ ಇವರು ನಡೆಸುವ ರಾಷ್ಟ್ರೀಯ ಅರ್ಹತಾ ಕಮ್ ಪ್ರವೇಶ ಪರೀಕ್ಷೆ (NEET) – 2020 ರಲ್ಲಿ; ಹಾಗೂ ಆರ್ಕಿಟೆಕ್ಚರ್ ಸೀಟುಗಳ ಪ್ರವೇಶಕ್ಕಾಗಿ ಕೌನ್ಸಿಲ್ ಆಫ್ ಆರ್ಕಿಟೆಕ್ಚರ್ ರವರು ನಡೆಸುವ NATA ಅಥವಾ JEE Paper -2 ಪರೀಕ್ಷೆಯಲ್ಲಿ ಕಡ್ಡಾಯವಾಗಿ ಅರ್ಹತೆಯನ್ನು ಪಡೆದಿರಬೇಕು.
4. **ಅರ್ಹತೆ:** ನಿಯಮ 5(1)ರ Karnataka Selection of Candidates for Admission to Government seats in Professional Educational Institutions Rules, 2006, ಅನ್ವಯ ಅರ್ಜಿ ಸಲ್ಲಿಸುವ ಅಭ್ಯರ್ಥಿಯು ಭಾರತೀಯ ಪ್ರಜೆಯಾಗಿರಬೇಕು ಮತ್ತು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಚುರ ಪಡಿಸಿರುವ ಅರ್ಹತಾ ಕಂಡಿಕೆಗಳಲ್ಲಿ ಯಾವುದಾದರು ಒಂದರಲ್ಲಿ ಅರ್ಹತೆ ಹೊಂದಿರಬೇಕು, ಇಲ್ಲದಿದ್ದಲ್ಲಿ ಅಂತಹ ಅಭ್ಯರ್ಥಿಗಳು ಸರ್ಕಾರಿ ಕೋಟದ ಸೀಟುಗಳನ್ನು ಕರ್ನಾಟಕ ಪರೀಕ್ಷಾ ಪ್ರಾಧಿಕಾರದ ಮೂಲಕ ಪಡೆಯಲು ಅರ್ಹತೆಯನ್ನು ಹೊಂದುವುದಿಲ್ಲ.
5. ಅರ್ಜಿ ಸಲ್ಲಿಸುವ ವಿಧಾನ, ಅರ್ಹತಾ ಕಂಡಿಕೆಗಳು ಹಾಗು "ಯುಜಿಸಿಇಟಿ–2020–ಮಾಹಿತಿ ಪುಸ್ತಕ"ವನ್ನು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಚುರ ಪಡಿಸಲಾಗಿದೆ. ಅಭ್ಯರ್ಥಿಗಳು ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ.

| | |
|---|---|
| ಆನ್‌ಲೈನ್ ಮುಖಾಂತರ ಅರ್ಜಿ ಸಲ್ಲಿಸುವುದು | **ದಿನಾಂಕ 05.02.2020ರ<br>ಬೆ. 11:00 ರಿಂದ 02.03.2020ರ ಸಂ. 5:30ರ ವರೆಗೆ** |
| ಆನ್‌ಲೈನ್ ಮೂಲಕ ಶುಲ್ಕವನ್ನು ಪಾವತಿ ಮಾಡಲು ಕೊನೆಯ ದಿನಾಂಕ | **06.03.2020** |
| ಆನ್‌ಲೈನ್ ಮೂಲಕ ಸಲ್ಲಿಸಿದ ಅರ್ಜಿಯಲ್ಲಿನ ಮಾಹಿತಿಗಳನ್ನು ಅವಶ್ಯವಿದ್ದಲ್ಲಿ ತಿದ್ದುಪಡಿ ಮಾಡಿಕೊಳ್ಳುವುದು (ಶುಲ್ಕ ಪಾವತಿ ಮಾಡುವವರಿಗೆ ಮಾತ್ರ) | **ದಿನಾಂಕ 19.03.2020ರ<br>ಬೆ. 11:00 ರಿಂದ 25.03.2020ರ ಸಂ. 5:30ರ ವರೆಗೆ** |
| ಪ್ರವೇಶ ಪತ್ರಗಳನ್ನು ಡೌನ್‌ಮಾಡಿಕೊಳ್ಳಲು | **10.04.2020ರ ಬೆ. 11:00 ರಿಂದ** |

**ಸಾಮಾನ್ಯ ಪ್ರವೇಶ ಪರೀಕ್ಷೆ – 2020ರ ವೇಳಾಪಟ್ಟಿ**

| ದಿನಾಂಕ | ದಿನ | ಸಮಯ | ವಿಷಯ | ಅಂಕಗಳು |
|---|---|---|---|---|
| 22.04.2020 | ಬುಧವಾರ | ಬೆಳಿಗ್ಗೆ 10:30 ರಿಂದ 11:50ರ ವರೆಗೆ | ಜೀವಶಾಸ್ತ್ರ | 60 |
| | | ಮಧ್ಯಾಹ್ನ 02:30 ರಿಂದ 03:50ರ ವರೆಗೆ | ಗಣಿತಶಾಸ್ತ್ರ | 60 |
| 23.04.2020 | ಗುರುವಾರ | ಬೆಳಿಗ್ಗೆ 10:30 ರಿಂದ 11:50ರ ವರೆಗೆ | ಭೌತಶಾಸ್ತ್ರ | 60 |
| | | ಮಧ್ಯಾಹ್ನ 02:30 ರಿಂದ 03:50ರ ವರೆಗೆ | ರಸಾಯನ ಶಾಸ್ತ್ರ | 60 |
| 24.04.2020 | ಶುಕ್ರವಾರ | ಬೆಳಿಗ್ಗೆ 11:30 ರಿಂದ<br>ಮಧ್ಯಾಹ್ನ 12:30ರ ವರೆಗೆ | ಹೊರನಾಡು ಹಾಗೂ ಗಡಿನಾಡು ಕನ್ನಡಿಗ ಅಭ್ಯರ್ಥಿಗಳಿಗೆ ಕನ್ನಡ ಭಾಷಾ ಪರೀಕ್ಷೆ – ಬೆಂಗಳೂರು ಕೇಂದ್ರದಲ್ಲಿ ಮಾತ್ರ (4ನೇ ತರಗತಿಯ ಮಟ್ಟದ) | 50 |

| | | |
|---|---|---|
| ಕೃಷಿಕ ಕುಟುಂಬ ಕೋಟದ ಅಡಿಯಲ್ಲಿ ಸೀಟು ಆಯ್ಕೆ ಬಯಸುವ ಅಭ್ಯರ್ಥಿಗಳಿಗೆ ದಾಖಲೆಗಳ ಪರಿಸೀಲನೆ ಮತ್ತು "ಕೃಷಿಗೆ ಸಂಬಂಧಿಸಿದಂತೆ ಮಾದರಿಗಳನ್ನು ಗುರುತಿಸಲು" ಪ್ರಾಯೋಗಿಕ ಪರೀಕ್ಷೆ | 11.05.2020 ರಿಂದ 14.05.2020ರ ವರೆಗೆ<br>(ಬೆ. 9:00 ರಿಂದ ಮ. 3:30)<br>ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ | ಸಂಬಂಧಿಸಿದ ಪ್ರಾಯೋಗಿಕ ಪರೀಕ್ಷೆಯ ಕೇಂದ್ರಗಳಲ್ಲಿ ಕೃಷಿಕ ಕೋಟಕ್ಕೆ ಸಂಬಂಧಿಸಿದಂತೆ ದಾಖಲಾತಿ ಪರಿಶೀಲನೆ |
| | 16.05.2020 ಶನಿವಾರ<br>ಬೆಳಿಗ್ಗೆ 9:00 ಗಂಟೆಯ ನಂತರ | ಪ್ರಾಯೋಗಿಕ ಪರೀಕ್ಷೆ |

**ಸೂಚನೆ :** ಕ.ಪ.ಪ್ರಾ (ಸಿಇಟಿ ಸೆಲ್) ಮೂಲಕ ಈ ಹಿಂದಿನ ವರ್ಷಗಳಲ್ಲಿ ಯಾವುದಾದರೂ ವಿಭಾಗದಲ್ಲಿ ಸೀಟನ್ನು ಆಯ್ಕೆ ಮಾಡಿಕೊಂಡು ಆಯಾ ವಿಭಾಗದ ಅಂತಿಮ ಸುತ್ತಿನ ಸೀಟು ಹಂಚಿಕೆಗೆ ಇಚ್ಛೆ / ಆಯ್ಕೆಗಳನ್ನು ದಾಖಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದ ಒಳಗೆ ಸೀಟನ್ನು ರದ್ದು ಪಡಿಸದೇ ಇರುವ ಅಭ್ಯರ್ಥಿಗಳು ಈ ಬಾರಿ ಅದೇ ವಿಭಾಗದಲ್ಲಿ ಸೀಟನ್ನು ಆಯ್ಕೆಮಾಡಿಕೊಳ್ಳಲು ಸಾಮಾನ್ಯ ಪ್ರವೇಶ ಪರೀಕ್ಷೆ–2020ಕ್ಕೆ ಹಾಜರಾಗಲು ಅರ್ಹರಿರುವುದಿಲ್ಲ. ಅಂತಹ ಅಭ್ಯರ್ಥಿಗಳು ಈ ವರ್ಷ ಬೇರೆ ವಿಭಾಗಗಳಲ್ಲಿ ಸೀಟನ್ನು ಆಯ್ಕೆ ಮಾಡಿಕೊಂಡಲ್ಲಿ ಅವರು ಹಿಂದಿನ ವರ್ಷಗಳಲ್ಲಿ ಆಯ್ಕೆಮಾಡಿಕೊಂಡಿದ್ದ ಸೀಟನ್ನು ಮುಟ್ಟುಗೋಲು ಹಾಕಿಕೊಳ್ಳಲಾಗುತ್ತದೆ.

ಸಹಿ/–

**(ಸುರಳ್ಕರ್ ವಿಕಾಸ್ ಕಿಶೋರ್,** ಭಾ.ಆ.ಸೇ.)

**ಕಾರ್ಯನಿರ್ವಾಹಕ ನಿರ್ದೇಶಕರು**

ಹೆಚ್ಚಿನ ವಿವರಗಳಿಗಾಗಿ ಅಭ್ಯರ್ಥಿಗಳು ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ಅನ್ನು ನೋಡಲು ಕೋರಿದೆ.
ಕೆಇಎ ಸಹಾಯವಾಣಿ ಸಂಖ್ಯೆಗಳು: 080 – 23 460 460 – (ಐದು ಲೈನುಗಳು – ಬೆ. 9:30 ರಿಂದ ಸಂ. 6:00 – ಸಾರ್ವತ್ರಿಕ ರಜಾ ದಿನಗಳನ್ನು ಹೊರತುಪಡಿಸಿ)

ವಾಸಾಸಂಇ/ಬೆಂಅ/2417/2019–20